ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕಾರ್ಮಿಕರಿಗೆ ಹಣ ಸಂದಾಯ ಮಾಡಿರುವ ಬಗ್ಗೆ

ಶ್ರೀ ವಿಜಯ್ ಸಿಂಗ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

118 (69) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೀದರ್ ಜಿಲ್ಲೆಯಲ್ಲಿ ಮಹಾಮಾರಿ ಕರೋನಾದಿಂದ ಲಾಕ್‌ಡೌನ್ ಮಾಡಿದ ಪರಿಣಾಮವಾಗಿ ಸರ್ಕಾರ, ಆಟೋ ಚಾಲಕರ, ಕಾರ್ಮಿಕರ ಖಾತೆಗಳಿಗೆ ಹಣ ಸಂದಾಯ ಮಾಡಲಾಗುವುದೆಂದು ಘೋಷಿಸಿದ್ದು, ಎಷ್ಟು ಕಾರ್ಮಿಕರು, ಈ ಸೌಲಭ್ಯವನ್ನು ಪಡೆದಿರುತ್ತಾರೆ;

(ಆ) ಇದುವರೆಗೆ ಜಿಲ್ಲೆಯಲ್ಲಿ ಎಷ್ಟು ಕಾರ್ಮಿಕರಿಂದ ಅರ್ಜಿಗಳನ್ನು ಸ್ವೀಕರಿಸಲಾಗಿದೆ; ಸ್ವೀಕರಿಸಿದ ಅರ್ಜಿಗಳಲ್ಲಿ ಎಷ್ಟು ಕಾರ್ಮಿಕರ ಖಾತೆಗಳಿಗೆ ಹಣ ಜಮಾ ಮಾಡಲಾಗಿದೆ? (ತಾಲ್ಲೂಕುವಾರು ಮಾಹಿತಿ ನೀಡುವುದು)